ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಸರ್ಕಾರಿ ಇಂಜಿನೀಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

426 (528) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಇಂಜಿನೀಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿದೆ ;

(ಆ) ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವಲ್ಲಿ ಮಾನದಂಡಗಳೇನು; (ವಿವರ ನೀಡುವುದು)

(ಇ) ಸದರಿಯವರಿಗೆ ತಲಾ ನೀಡಲಾಗುತ್ತಿರುವ ಗೌರವಧನದ ಮೊತ್ತವೆಷ್ಟು ; ಯಾವ ಸಾಲಿನಿಂದ ನೀಡಲಾಗುತ್ತಿದೆ ;

(ಈ) ಸದರಿಯವರಿಗೆ ಕಳೆದ 18 ತಿಂಗಳಿನಿಂದ ಗೌರವಧನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಗೌರವಧನ ಪಾವತಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು;

(ಊ) ಯಾವ ಕಾಲಮಿತಿಯಲ್ಲಿ ಬಾಕಿ ಇರುವ ಗೌರವಧನವನ್ನು ಪಾವತಿಸಲಾಗುವುದು ?